**All India Radio: Bangalore**
**National Bulletin In Kannada**
**15.04.2026 7.35 am**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**15.04.2026 7.35 am**

**<>><><*><><<>**

ಮುಖ್ಯಾಂಶಗಳು

**೧. ಅಮೆರಿಕ ಅಧ್ಯಕ್ಷರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಮಾತುಕತೆ; ಪಶ್ಚಿಮ ಏಷ್ಯಾದ ಪರಿಸ್ಥಿತಿ ಕುರಿತು ಚರ್ಚೆ**

**೨. ಕರ್ನಾಟಕಕ್ಕೆ ಇಂದು ಪ್ರಧಾನಿ ಭೇಟಿ; ಆದಿಚುಂಚನಗಿರಿ ಕ್ಷೇತ್ರದಲ್ಲಿ ‘ಶ್ರೀ ಗುರು ಭೈರವೈಕ್ಯ ಮಂದಿರ’ ಲೋಕಾರ್ಪಣೆ**

**೩. ಜಾಗತಿಕ ಅನಿಶ್ಚಿತತೆಯ ನಡುವೆಯೂ ಭಾರತದ ಆರ್ಥಿಕ ಬೆಳವಣಿಗೆ ಸ್ಥಿರ- ಐಎಂಎಫ್**

**೪. ಐಪಿಎಲ್ ಟಿ-೨೦ ಕ್ರಿಕೆಟ್: ಕೊಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ ಚೆನ್ನೈ ಸೂಪರ್ ಕಿಂಗ್ಸ್ ತಂಡಕ್ಕೆ ಭರ್ಜರಿ ಜಯ**

**<>><><*><><<>**

ಪ್ರಧಾನಿ ನರೇಂದ್ರ ಮೋದಿ ನಿನ್ನೆ ರಾತ್ರಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಂದ ದೂರವಾಣಿ ಕರೆ ಸ್ವೀಕರಿಸಿದರು. ಉಭಯ ನಾಯಕರು, ಪಶ್ಚಿಮ ಏಷ್ಯಾದ ಪರಿಸ್ಥಿತಿಯ ಬಗ್ಗೆ ಚರ್ಚಿಸಿದ್ದಾರೆ ಮತ್ತು ಹಾರ್ಮುಜ್ ಜಲಸಂಧಿಯನ್ನು ಮುಕ್ತ ಹಾಗೂ ಸುರಕ್ಷಿತವಾಗಿಡುವ ಮಹತ್ವವನ್ನು ಒತ್ತಿ ಹೇಳಿದ್ದಾರೆ. ದೂರವಾಣಿ ಸಂಭಾಷಣೆಯ ಸಮಯದಲ್ಲಿ, ವಿವಿಧ ಕ್ಷೇತ್ರಗಳಲ್ಲಿ ಭಾರತ ಮತ್ತು ಅಮೆರಿಕ ನಡುವಿನ ದ್ವಿಪಕ್ಷೀಯ ಸಹಕಾರದಲ್ಲಿ ಸಾಧಿಸಿದ ಗಣನೀಯ ಪ್ರಗತಿಯನ್ನು ಉಭಯ ನಾಯಕರು ಪರಿಶೀಲಿಸಿದ್ದಾರೆ. ಎಲ್ಲಾ ಕ್ಷೇತ್ರಗಳಲ್ಲಿ ಸಮಗ್ರ ಜಾಗತಿಕ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸಲು ಬದ್ಧರಾಗಿರುವುದಾಗಿ ಪುನರುಚ್ಚರಿಸಿದ್ದಾರೆ.

**<>><><*><><<>**

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದಿನಿಂದ ಎರಡು ದಿನಗಳ ಕಾಲ ಮಹಾರಾಷ್ಟ್ರಕ್ಕೆ ಭೇಟಿ ನೀಡಲಿದ್ದಾರೆ. ರಾಷ್ಟ್ರಪತಿಗಳು ಇಂದು ಏಮ್ಸ್ ನಾಗ್ಪುರದ ಎರಡನೇ ಘಟಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ನಂತರ ಅವರು ನಾಗ್ಪುರದ ರಾಷ್ಟ್ರೀಯ ನೇರ ತೆರಿಗೆಗಳ ಅಕಾಡೆಮಿಯಲ್ಲಿ ೭೮ ನೇ ಬ್ಯಾಚ್‌ನ ಭಾರತೀಯ ಕಂದಾಯ ಸೇವೆ ಅಧಿಕಾರಿ ತರಬೇತಿದಾರರ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

**<>><><*><><<>**

ಕರ್ನಾಟಕದ ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನ ಐತಿಹಾಸಿಕ ಆದಿಚುಂಚನಗಿರಿ ಕ್ಷೇತ್ರಕ್ಕೆ ಇಂದು ಪ್ರಧಾನಿ ನರೇಂದ್ರ ಮೋದಿ ಭೇಟಿ ನೀಡಲಿದ್ದಾರೆ. ಅವರು ‘ಶ್ರೀ ಗುರು ಭೈರವೈಕ್ಯ ಮಂದಿರ’ವನ್ನು ಲೋಕಾರ್ಪಣೆ ಮಾಡಲಿದ್ದಾರೆ. ವಿವಿಧ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗಿಯಾಗಲಿದ್ದು, ನಂತರ ಬಿಜಿಎಸ್ ಕ್ರೀಡಾಂಗಣದಲ್ಲಿ ನಡೆಯಲಿರುವ ಸಂತ ಸಂಗಮ ವೇದಿಕೆ ಕಾರ್ಯಕ್ರಮದಲ್ಲಿ ಭಾಷಣ ಮಾಡಲಿದ್ದಾರೆ. ಇಂದು ಬೆಳಗ್ಗೆ ೧೦ ಗಂಟೆ ೫ ನಿಮಿಷಕ್ಕೆ ಬೆಂಗಳೂರಿನ ಎಚ್.ಎ.ಎಲ್ ವಿಮಾನ ನಿಲ್ದಾಣಕ್ಕೆ ಆಗಮಿಸಲಿರುವ ಪ್ರಧಾನಿ, ಎಚ್.ಎ.ಎಲ್‌ನಿಂದ ಆದಿಚುಂಚನಗಿರಿ ತಪೋವನಕ್ಕೆ ಹೆಲಿಕಾಪ್ಟರ್ ಮೂಲಕ ತೆರಳಲಿದ್ದು, ಬಳಿಕ ಆದಿಚುಂಚನಗಿರಿ ಕ್ಷೇತ್ರಕ್ಕೆ ರಸ್ತೆ ಮೂಲಕ ಆಗಮಿಸಲಿದ್ದಾರೆ. ಈ ಹಿನ್ನೆಲೆಯಲ್ಲಿ ಇಂದು ಮಧ್ಯಾಹ್ನದವರೆಗೆ ಆದಿಚುಂಚನಗಿರಿ ಕ್ಷೇತ್ರಕ್ಕೆ ಭಕ್ತರಿಗೆ ಪ್ರವೇಶ ನಿರ್ಬಂಧಿಸಿರುವುದಾಗಿ ಪೀಠಾಧ್ಯಕ್ಷ ಡಾ.ನಿರ್ಮಲಾನಂದನಾಥ ಸ್ವಾಮೀಜಿ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿಯವರು ‘ಶ್ರೀ ಗುರು ಭೈರವೈಕ್ಯ ಮಂದಿರ ಹಾಗೂ ಬಾಲಗಂಗಾಧರನಾಥ ಶ್ರೀಗಳ ಗದ್ದುಗೆ ಉದ್ಘಾಟನಾ ಕಾರ್ಯ ನೆರವೇರಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಸೇರಿದಂತೆ ರಾಜ್ಯದ ಹಲವು ಸಚಿವರು ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ. ಪ್ರಧಾನಿ, ಆಗಮನದ ಹಿನ್ನೆಲೆಯಲ್ಲಿ ಹೆಚ್ಚಿನ ಭದ್ರತೆ ಏರ್ಪಡಿಸಲಾಗಿದೆ.

**<>><><*><><<>**

ವಿಶೇಷ ಸಂಸತ್ ಅಧಿವೇಶನದಲ್ಲಿ ಕೇಂದ್ರ ಸರ್ಕಾರ ಮಂಡಿಸಲಿರುವ ಮಹಿಳಾ ಮೀಸಲಾತಿ ಮಸೂದೆ ಸಮತೋಲಿತವಾಗಿದ್ದು, ಪ್ರತಿಯೊಂದು ಸಮುದಾಯ, ಪ್ರದೇಶ ಮತ್ತು ಪ್ರತಿಯೊಂದು ರಾಜ್ಯದ ಆಕಾಂಕ್ಷೆಗಳನ್ನು ಈಡೇರಿಸುತ್ತದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಪ್ರತಿಪಾದಿಸಿದ್ದಾರೆ. ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಶಾಸನದ ಬಗ್ಗೆ ಯಾವುದೇ ಟೀಕೆಗೆ ಅವಕಾಶವಿಲ್ಲ. ಈ ತಿಂಗಳ ೧೬ ರಿಂದ ೧೮ ರವರೆಗೆ ನಡೆಯಲಿರುವ ಸಂಸತ್ ಅಧಿವೇಶನದಲ್ಲಿ ತರಲಾಗುತ್ತಿರುವ ಶಾಸನದ ಕುರಿತು ಪ್ರತಿಯೊಂದು ರಾಜಕೀಯ ಪಕ್ಷಕ್ಕೂ ತಿಳಿಸಲಾಗಿದೆ. ಈ ಬಗ್ಗೆ ಯಾವುದೇ ಪಕ್ಷ ವಿರೋಧಿಸುತ್ತಿಲ್ಲ ಎಂದರು.  ನಾರಿ ಶಕ್ತಿ ವಂದನ ಅಧಿನಿಯಮ ಅಂಗೀಕರಿಸಲ್ಪಟ್ಟಾಗ, ಯಾವುದೇ ರಾಜಕೀಯ ಪಕ್ಷ ಅದನ್ನು ವಿರೋಧಿಸಿರಲಿಲ್ಲ. ರಾಷ್ಟ್ರೀಯ ಹಿತಾಸಕ್ತಿಯಲ್ಲಿ ಒಟ್ಟಾಗಿ ಬಂದ ಎಲ್ಲಾ ರಾಜಕೀಯ ಪಕ್ಷಗಳಿಗೆ ಪ್ರಧಾನಿ ನರೇಂದ್ರ ಮೋದಿ ಕೃತಜ್ಞತೆ ಕೂಡ ಸಲ್ಲಿಸಿದ್ದಾರೆ ಎಂದು ಅವರು ಹೇಳಿದರು.  ಮಹಿಳಾ ಮೀಸಲಾತಿ ರಾಜಕೀಯ ವಿಷಯವಾಗಲು ಸಾಧ್ಯವಿಲ್ಲ. ಮಹಿಳಾ ಮೀಸಲಾತಿ ಪ್ರಕ್ರಿಯೆಯು ಮತ್ತಷ್ಟು ವಿಳಂಬವಾದರೆ, ಅದು ಅತ್ಯಂತ ನೋವಿನ ಸಂಗತಿಯಾಗಲಿದೆ ಎಂದು ಸಚಿವ ಕಿರಣ್ ರಿಜಿಜು ಅಭಿಪ್ರಾಯಪಟ್ಟರು.

**<>><><*><><<>**

ಬಿಹಾರದಲ್ಲಿ ಎನ್‌ಡಿಎ ಶಾಸಕಾಂಗ ಪಕ್ಷದ ನಾಯಕರಾಗಿ ಉಪಮುಖ್ಯಮಂತ್ರಿ ಸಾಮ್ರಾಟ್ ಚೌಧರಿ ಆಯ್ಕೆಯಾಗಿದ್ದಾರೆ. ಈ ಮೂಲಕ ಅವರು ಬಿಹಾರದ ಮುಂದಿನ ಮುಖ್ಯಮಂತ್ರಿಯಾಗಲು ದಾರಿ ಮಾಡಿಕೊಡಲಾಗಿದೆ. ಪಾಟ್ನಾದಲ್ಲಿ ನಡೆದ ಎನ್‌ಡಿಎ ಶಾಸಕಾಂಗ ಪಕ್ಷದ ಸಭೆಯ ನಂತರ ಈ ಘೋಷಣೆ ಮಾಡಲಾಯಿತು.  ಕೇಂದ್ರ ವೀಕ್ಷಕರಾಗಿ ನೇಮಕಗೊಂಡ ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಸಮ್ಮುಖದಲ್ಲಿ ಸಾಮ್ರಾಟ್ ಚೌಧರಿ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.  ನಿತೀಶ್ ಕುಮಾರ್ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿ, ತಮ್ಮ ಸಚಿವ ಸಂಪುಟವನ್ನು ವಿಸರ್ಜಿಸಿದ ನಂತರ ಈ ಬೆಳವಣಿಗೆ ನಡೆದಿದೆ. ಸಾಮ್ರಾಟ್ ಚೌಧರಿ ಅವರು ತಾರಾಪುರ ಕ್ಷೇತ್ರದ ಶಾಸಕರಾಗಿದ್ದಾರೆ. ಇದೇ ವೇಳೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಬಿಹಾರವನ್ನು ಅಭಿವೃದ್ಧಿಯತ್ತಾ ಕೊಂಡೊಯ್ಯಲು ಶ್ರಮಿಸುವುದಾಗಿ ಹೇಳಿದ್ದಾರೆ.

**<>><><*><><<>**

ಪಶ್ಚಿಮ ಬಂಗಾಳದಲ್ಲಿ ಮೊದಲ ಹಂತದ ವಿಧಾನಸಭಾ ಚುನಾವಣೆಗೆ ಕೇವಲ ಒಂದು ವಾರ ಬಾಕಿ ಇರುವ ಕಾರಣ ಬಿಜೆಪಿ ತನ್ನ ಚುನಾವಣಾ ಪ್ರಚಾರವನ್ನು ಬಿರುಸುಗೊಳಿಸಿದೆ. ಬಿಜೆಪಿ ಹಿರಿಯ ನಾಯಕ, ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ರಾಜ್ಯದಲ್ಲಿ ಹಲವಾರು ಸಾರ್ವಜನಿಕ ಸಭೆಗಳನ್ನು ನಡೆಸಲಿದ್ದಾರೆ. ಡಾರ್ಜಿಲಿಂಗ್‌ನ ಲೆಬಾಂಗ್ ಇಂದು ಮಧ್ಯಾಹ್ನ ನಡೆಯುವ ರ್‍ಯಾಲಿಯಲ್ಲಿ ಭಾಗವಹಿಸಲಿದ್ದಾರೆ. ನಂತರ ಜಲ್ಪೈಗುರಿ ಜಿಲ್ಲೆಯ ರಾಜ್‌ಗಂಜ್‌ನಲ್ಲಿ ಪ್ರಚಾರ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಬಳಿಕ ಅವರು ಅಲಿಪುರ್ದೂರ್‌ನ ಫಲಕತಾ ಮಿಲ್ ರಸ್ತೆ ಮೈದಾನದಲ್ಲಿ ರ್‍ಯಾಲಿಯಲ್ಲಿ ಭಾಗವಹಿಸಲಿದ್ದಾರೆ. ಕೂಚ್‌ಬೆಹಾರ್‌ನ ತುಫಂಗಂಜ್‌ನಲ್ಲಿರುವ ಕಾಲಿಬರಿ ಆರ್‌ಎಂಸಿ ಮೈದಾನದಲ್ಲಿ ನಡೆಯುವ ಸಾರ್ವಜನಿಕ ಸಭೆಯಲ್ಲಿ ಸಚಿವ ಅಮಿತ್ ಶಾ ಪಾಲ್ಗೊಳ್ಳಲಿದ್ದಾರೆ. ಇನ್ನೊಂದೆಡೆ, ಟಿಎಂಸಿ ಮತ್ತು ಕಾಂಗ್ರೆಸ್ ನಾಯಕರು ತಮ್ಮ ಪಕ್ಷದ ಅಭ್ಯರ್ಥಿಗಳ ಪರ ಪ್ರಚಾರದಲ್ಲಿ ತೊಡಗಲಿದ್ದಾರೆ.

**<>><><*><><<>**

ಪಶ್ಚಿಮ ಏಷ್ಯಾ ಸಂಘರ್ಷದಿಂದ ಉಂಟಾದ ಜಾಗತಿಕ ಅನಿಶ್ಚಿತತೆಯ ನಡುವೆಯೂ ಭಾರತದ ಆರ್ಥಿಕ ಬೆಳವಣಿಗೆಯ ಮುನ್ನೋಟವು ಸ್ಥಿರವಾಗಿದೆ ಎಂದು ಅಂತಾರಾಷ್ಟ್ರೀಯ ಹಣಕಾಸು ನಿಧಿ-ಐಎಂಎಫ್ ಮುಖ್ಯ ಅರ್ಥಶಾಸ್ತ್ರಜ್ಞ ಪಿಯರೆ ಒಲಿವಿಯರ್ ಗೌರಿಂಚಾಸ್ ಹೇಳಿದ್ದಾರೆ.  ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೨೦೨೫ ರಲ್ಲಿ ಭಾರತ ಉತ್ತಮ ಪ್ರದರ್ಶನ ನೀಡಿತು. ಜಿಡಿಪಿ ಬೆಳವಣಿಗೆ ಶೇಕಡಾ ೭.೬ ಎಂದು ಅಂದಾಜಿಸಲಾಗಿದೆ. ಇದೇ ವೇಳೆ ೨೦೨೬ ರಲ್ಲಿ ಸುಮಾರು ೬.೫ ಪ್ರತಿಶತದಷ್ಟು ಜಿಡಿಪಿ ಬೆಳವಣಿಗೆ ನಿರೀಕ್ಷೆಯಿದೆ ಎಂದು ತಿಳಿಸಿದರು.  ಆದಾಗ್ಯೂ, ಜಾಗತಿಕ ಇಂಧನ ಬೆಲೆಗಳು ಮತ್ತು ಹೆಚ್ಚುತ್ತಿರುವ ಆಹಾರ ವೆಚ್ಚಗಳಿಂದಾಗಿ ೨೦೨೬ ರಲ್ಲಿ ಹಣದುಬ್ಬರ ಸುಮಾರು ೪.೭ ಪ್ರತಿಶತಕ್ಕೆ ಏರಿಕೆಯಾಗಬಹುದು ಎಂದು ಅವರು ಅಂದಾಜಿಸಿದ್ದಾರೆ.  ಅನೇಕ ರಾಷ್ಟ್ರಗಳು ನಿಧಾನಗತಿಯ ವಿಸ್ತರಣೆ ಮತ್ತು ಹೆಚ್ಚುತ್ತಿರುವ ಅನಿಶ್ಚಿತತೆಯೊಂದಿಗೆ ಹೋರಾಡುತ್ತಿರುವ ಸಮಯದಲ್ಲಿ ಜಾಗತಿಕ ಬೆಳವಣಿಗೆಯ ಪ್ರಮುಖ ಚಾಲಕನಾಗಿ ಭಾರತದ ಸ್ಥಾನವನ್ನು ಐಎಂಎಫ್ ಮೌಲ್ಯಮಾಪನವು ಒತ್ತಿಹೇಳುತ್ತದೆ.

**<>><><*><><<>**

ಛತ್ತೀಸ್‌ಗಢದ ಸಿಂಘಾಂತೇರೈ ಗ್ರಾಮದಲ್ಲಿ ನಿನ್ನೆ ಸಂಭವಿಸಿದ ಬಾಯ್ಲರ್ ಸ್ಫೋಟದಲ್ಲಿ ಮೃತಪಟ್ಟವರ ಸಂಖ್ಯೆ ೧೩ ಕ್ಕೆ ಏರಿಕೆಯಾಗಿದೆ. ಶಕ್ತಿ ಜಿಲ್ಲೆಯ ಸಿಂಘಾಂತೇರೈ ಗ್ರಾಮದಲ್ಲಿರುವ ವೇದಾಂತ ಲಿಮಿಟೆಡ್ ವಿದ್ಯುತ್ ಸ್ಥಾವರದಲ್ಲಿ ಬಾಯ್ಲರ್ ಟ್ಯೂಬ್ ಸ್ಫೋಟಗೊಂಡು ಈ ಘಟನೆ ಸಂಭವಿಸಿದೆ. ಘಟನೆ ಕುರಿತು ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ. ಮೃತರ

ಕುಟುಂಬದವರಿಗೆ ಪ್ರಧಾನ ಮಂತ್ರಿಗಳ ರಾಷ್ಟ್ರೀಯ ಪರಿಹಾರ ನಿಧಿಯಿಂದ ಎರಡು ಲಕ್ಷ ರೂಪಾಯಿ ಮತ್ತು ಗಾಯಾಳುಗಳಿಗೆ ೫೦ ಸಾವಿರ ರೂಪಾಯಿ ಪರಿಹಾರವನ್ನು ಪ್ರಧಾನಿ ಘೋಷಿಸಿದ್ದಾರೆ.  ಇದೇ ವೇಳೆ, ಮೃತ ಕಾರ್ಮಿಕರ ಕುಟುಂಬಕ್ಕೆ ತಲಾ ೫ ಲಕ್ಷ ರೂಪಾಯಿ ಮತ್ತು ಗಾಯಗೊಂಡವರಿಗೆ ೫೦ ಸಾವಿರ ರೂಪಾಯಿ ಪರಿಹಾರವನ್ನು ಛತ್ತೀಸಗಢ ಮುಖ್ಯಮಂತ್ರಿ ವಿಷ್ಣು ದೇವ್ ಸಾಯಿ ಘೋಷಿಸಿದ್ದಾರೆ.

**<>><><*><><<>**

ಇರಾನ್ ಜೊತೆಗಿನ ಮಾತುಕತೆಗಳು ಕೆಲವೇ ದಿನಗಳಲ್ಲಿ ಪುನರಾರಂಭವಾಗಬಹುದು ಎಂದು ಅಮೆರಿಕ ತಿಳಿಸಿದೆ.  ಇನ್ನೊಂದೆಡೆ, ದಶಕಗಳ ನಂತರ ಇಸ್ರೇಲ್ ಮತ್ತು ಲೆಬನಾನ್ ಮೊದಲ ಬಾರಿಗೆ ನೇರ ಮಾತುಕತೆಗಳನ್ನು ಪ್ರಾರಂಭಿಸಿವೆ. ಇದು ಪಶ್ಚಿಮ ಏಷ್ಯಾದಾದ್ಯಂತ ಹೆಚ್ಚುತ್ತಿರುವ ಉದ್ವಿಗ್ನತೆಯನ್ನು ಕಡಿಮೆ ಮಾಡಲು ಸಮಾನಾಂತರ ರಾಜತಾಂತ್ರಿಕ ಪ್ರಯತ್ನಗಳನ್ನು ಸೂಚಿಸುತ್ತದೆ. ಅಮೆರಿಕ ಮತ್ತು ಇರಾನ್ ನಡುವಿನ ಮಾತುಕತೆಗಳು ಮುಂದಿನ ಎರಡು ದಿನಗಳಲ್ಲಿ ಪಾಕಿಸ್ತಾನದಲ್ಲಿ ಪುನರಾರಂಭಗೊಳ್ಳುವ ನಿರೀಕ್ಷೆಯಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

**<>><><*><><<>**

ಚೆನ್ನೈನ ಎಂ.ಎ. ಚಿದಂಬರಂ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಕೊಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ ಚೆನ್ನೈ ಸೂಪರ್ ಕಿಂಗ್ಸ್ ೩೨ ರನ್‌ಗಳಿಂದ ಭರ್ಜರಿ ಜಯ ದಾಖಲಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಚೆನ್ನೈ ಸೂಪರ್ ಕಿಂಗ್ಸ್ ನಿಗದಿತ ೨೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೧೯೨ ರನ್ ಗಳಿಸಿತು. ಸಂಜು ಸ್ಯಾಮ್ಸನ್ ೪೮ ರನ್, ಬ್ರೆವಿಸ್ ೪೧ ರನ್ ಹಾಗೂ ಆಯುಶ್ ಮಾತ್ರೆ ೩೮ ರನ್ ಗಳಿಸಿ, ತಂಡಕ್ಕೆ ನೆರವಾದರು. ಗೆಲುವಿನ ಗುರಿ ಬೆನ್ನತ್ತಿದ ಕೊಲ್ಕತ್ತಾ ನೈಟ್ ರೈಡರ್ಸ್ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೧೬೦ ರನ್ ಗಳಿಸಲಷ್ಟೇ ಶಕ್ತವಾಯಿತು. ಚೆನ್ನೈ ಸೂಪರ್ ಕಿಂಗ್ಸ್ ಪರ ನೂರ್ ಅಹ್ಮದ್ ೩ ವಿಕೆಟ್ ಕಬಳಿಸುವ ಮೂಲಕ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಅನ್ಶುಲ್ ಕಾಂಬೋಜ್ ೨ ವಿಕೆಟ್ ಪಡೆದರು.  ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಲಖ್ನೋ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨.೩೦ ಕ್ಕೆ ><><<>**